For more job news visit : www.kpscvaani.com

ನೇಮಕಾತಿಗಾಗಿ ಸಂದರ್ಶನ

ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಬೀದರ್ ವಿಭಾಗದ ಬೀದರ್-1, ಬೀದರ್-2, ಭಾಲ್ಕಿ, ಔರಾದ್, ಬಸವಕಲ್ಯಾಣ ಮತ್ತು ಹುಮನಾಬಾದ್ ಘಟಕಗಳ ಬಸ್ ಚಾಲನೆಗೆ 100 ಚಾಲಕರು ಹಾಗೂ ವಾಹನಗಳ ನಿರ್ವಹಣೆಗೆ 50 ತಾಂತ್ರಿಕ ಸಹಾಯಕರು ಬೇಕಿರುವುದರಿಂದ ಅರ್ಹ ಅಭ್ಯರ್ಥಿಗಳ ಆಯ್ಕೆಗಾಗಿ ಸಂದರ್ಶನ ಏರ್ಪಡಿಸಲಾಗಿದೆ. ಡಿಸೆಂಬರ್ 2ರಿಂದ 4ರವರೆಗೆ ಚಾಲಕ ಹುದ್ದೆಗೆ ಹಾಗೂ ಡಿ.6ರಿಂದ 7ರವರೆಗೆ ತಾಂತ್ರಿಕ ಸಹಾಯಕ ಹುದ್ದೆಗೆ ಕ.ಕ.ರ.ಸಾ ನಿಗಮದ ಹಳೆ ಬಸ್ ನಿಲ್ದಾಣದ ಬೀದರ್ ವಿಭಾಗೀಯ ಕಚೇರಿಯ ಸಮಯದಲ್ಲಿ ನೇರ ಸಂದರ್ಶನ ನಡೆಸಲಾಗುತ್ತಿದೆ ಎಂದು ಪ್ರಕಟಣೆ ತಿಳಿಸಿದೆ.

For more job news visit : www.kpscvaani.com

ಕಾರಾಗೃಹ ವಾರ್ಡನ್

ಕಲಬುರಗಿ, ಬೀದರ್, ರಾಯಚೂರು, ಯಾದಗಿರಿ ಜಿಲ್ಲೆಯ ಮಾಜಿ ಸೈನಿಕರಿಗೆ ಕರ್ನಾಟಕ ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಕಾರಾಗೃಹ ವಾರ್ಡನ್ ಹುದ್ದೆಗೆ ತಾತ್ಕಾಲಿಕವಾಗಿ ಒಂದು ವರ್ಷ ಅವಧಿಗೆ ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಸ್ವಯಂ ಲಿಖಿತ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ. ಕಾರ್ಯನಿರ್ವಹಿಸಲು ಇಚ್ಛಿಸುವವರು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಕಲಬುರಗಿ ಕಚೇರಿಗೆ ಸ್ವಯಂ ಲಿಖಿತ ಅರ್ಜಿಯನ್ನು ನವೆಂಬರ್ 30ರ ಒಳಗೆ ಕಚೇರಿ ಸಮಯದಲ್ಲಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ: ದೂ.ಸಂ.08472 225003